# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/03/ಗ.ಕೋಶ/2013

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:17.06.2014

ಇಂದ
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ಬಹುಮಹಡಿಗಳ ಕಟ್ಟಡ
ಬೆಂಗಳೂರು.

ಇವರಿಗೆ
1.ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2.ಮುಖ್ಯ ಇಂಜನಿಯರ್
ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
3.ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ರೂರಲ್ ಇನ್ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್,ಬೆಂಗಳೂರು.
4.ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು
ಕರ್ನಾಟಕ ರೂರಲ್ ರೋಡ್ಸ್ ಡೆವಲಪ್‌ಮೆಂಟ್ ಏಜೆನ್ಸಿ, ಬೆಂಗಳೂರು.

ಮಾನ್ಯರೇ,

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಡಿ ಅನುಷ್ಠಾನಗೊಳಿಸಲಾಗುತ್ತಿರುವ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶಕ್ಕೆ ಅಳವಡಿಸಿ ಪಾವತಿ ಮಾಡುವ ಕುರಿತು.

ಉಲ್ಲೇಖ: 1. ಸರ್ಕಾರದ ಸುತ್ತೋಲೆ ಸಮ ಸಂಖ್ಯೆ ದಿನಾಂಕ:20.09.2013
2. ಸರ್ಕಾರದ ಅರೆ ಸರ್ಕಾರಿ ಪತ್ರ ಸಮ ಸಂಖ್ಯೆ: ದಿನಾಂಕ:20.01.2014
3. ಸರ್ಕಾರದ ಪತ್ರ ಸಮ ಸಂಖ್ಯೆ: ದಿನಾಂಕ:26.03.2014
4. ಸರ್ಕಾರದ ಸುತ್ತೋಲೆ ಸಮ ಸಂಖ್ಯೆ ಮತ್ತು ಗ್ರಾಅಪ/46/ಗ್ರಾನೀಸ (2)2014, ದಿನಾಂಕ:08.04.2014.
5. ಸರ್ಕಾರದ ಸುತ್ತೋಲೆ ಸಮ ಸಂಖ್ಯೆ ದಿನಾಂಕ:19.05.2014.

*****

ಉಲ್ಲೇಖ (1) ರಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅಭಿವೃದ್ಧಿಪಡಿಸಿರುವ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಬಳಕೆಯನ್ನು ದಿನಾಂಕ:03.10.2013 ರಿಂದ ಕಡ್ಡಾಯಗೊಳಿಸಲಾಗಿರುತ್ತದೆ ಹಾಗೂ ಇಲಾಖೆಯಿಂದ ತೆಗೆದುಕೊಳ್ಳಲಾಗುವ ಎಲ್ಲಾ ಕಾಮಗಾರಿಗಳಿಗೆ ತಂತ್ರಾಂಶದ ಹೊರಗಡೆ ಬಿಲ್ಲುಗಳನ್ನು ಪಾವತಿ ಮಾಡುವುದನ್ನು ಸದರಿ ದಿನಾಂಕದಿಂದ ನಿಷೇಧಿಸಲಾಗಿದೆ.

ಮುಂದುವರೆದು ದಿನಾಂಕ:01.04.2014ರಿಂದ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಕಾರ್ಯಕ್ರಮವನ್ನೂ ಸಹ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ ಕಾರ್ಯಕ್ರಮದ ಬಿಲ್ಲುಗಳನ್ನು ಕಡ್ಡಾಯವಾಗಿ ಸದರಿ ತಂತ್ರಾಂಶದಿಂದ ಸೃಜಿಸಲಾಗುವ ಪಾವತಿ ಆದೇಶದ ಮೂಲಕ ಪಾವತಿ ಮಾಡಬೇಕಾಗಿರುತ್ತದೆ. ಈ ಕುರಿತು ಉಲ್ಲೇಖಿತ ಸುತ್ತೋಲೆಗಳಲ್ಲಿ ಅನೇಕ ಬಾರಿ ಸೂಚನೆಗಳನ್ನು ನೀಡಲಾಗಿರುತ್ತದೆ.

ದಿನಾಂಕ:17.06.2014 ರಂದು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಪ್ರಗತಿ ಬಗ್ಗೆ ಪರಿಶೀಲನೆ ಮಾಡಿದಾಗ ಪ್ರಗತಿ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಬಗ್ಗೆ ಹಲವಾರು ಬಾರಿ ನಿರ್ದೇಶನ ನೀಡಿದ್ದರೂ ಕ್ರಮ ವಹಿಸದೇ ಇರುವುದು ವಿಷಾದನೀಯ.

ಇನ್ನು ಮುಂದೆ 2014-15ನೇ ಸಾಲಿನಿಂದ ಇಲಾಖೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಅನುಮೋದನೆಗೊಂಡ ಕ್ರಿಯಾಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ ಹಣ ಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಮತ್ತೊಮ್ಮೆ ಸೂಚಿಸಿದೆ.

ಒಂದು ವೇಳೆ ಇದನ್ನು ನಿರ್ಲಕ್ಷಿಸಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಈ ಮೂಲಕ ಎಚ್ಚರಿಕೆ ನೀಡಿದೆ.

ತಮ್ಮ ವಿಶ್ವಾಸಿ,

ಟಿ.ಎಂ.ವಿಜಯಭಾಸ್ಕರ್

(ಟಿ.ಎಂ.ವಿಜಯ ಬಾಸ್ಕರ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು(ಪಂ.ರಾಜ್)/ಆಯುಕ್ತರು(ಗ್ರಾಮೀಣಾಭಿವೃದ್ಧಿ)/ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)/ನಿರ್ದೇಶಕರು (ಇ-ಆಡಳಿತ), ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರಿಗೆ, ಗ್ರಾಅಪ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.